# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 320 |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 15.02.2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕಾಮಗಾರಿಗಳ ಟೆಂಡರ ಪ್ರಕ್ರಿಯೆಗೆ ಸರ್ಕಾರ ರೂಪಿಸಿರುವ ನೀತಿ ನಿಯಮಗಳೇನು; | ಲೋಕೋಪಯೋಗಿ ಇಲಾಖೆಯಿಂದ ಕೈಗೊಳ್ಳಲಾಗುವ ಅಭಿವೃದ್ಧಿ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕ ಕಾಯ್ದೆ 1999, ನಿಯಮ–2000, ಇಲಾಖಾಸಂಹಿತೆ–2014 ಮತ್ತು ಸರ್ಕಾರದ ಮಾರ್ಗಸೂಚಿಯಾದ Standard bidding document (Kw1, Kw2, Kw3, Kw4) ರಂತೆ ಹಾಗೂ ಕಾಲಕಾಲಕ್ಕೆ ಸರ್ಕಾರದ ವತಿಯಿಂದ ಹೊರಡಿಸಲಾಗುವ ನಿಯಮ / ಮಾರ್ಗಸೂಚಿಗಳನ್ವಯ ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು. |
| ಆ) | ತಾಂತ್ರಿಕವಾಗಿ ಹಾಗೂ ಆರ್ಥಿಕವಾಗಿ ಅರ್ಹತೆ ಇದ್ದವರಿಗೆ ಕಾಮಗಾರಿಯನ್ನು ಪ್ರಾರಂಭ ಮಾಡಲು ಕಾರ್ಯಾದೇಶ ನೀಡುವ ಸಂದರ್ಭದಲ್ಲಿ ಇರುವ ನಿಯಮವೇನು; | ತಾಂತ್ರಿಕವಾಗಿ ಹಾಗೂ ಆರ್ಥಿಕವಾಗಿ ಅರ್ಹತೆ ಇದ್ದವರ ದರಕಾಸ್ತುಗಳನ್ನು ಮೌಲ್ಯಮಾಪನ ಮಾಡಿ, ಮೊದಲ ಕಡಿಮೆ ದರ ನಮೂದಿಸಿರುವ ಗುತ್ತಿಗೆದಾರರಿಗೆ ಕಾಮಗಾರಿಯನ್ನು ಪ್ರಾರಂಭ ಮಾಡಲು ಕಾರ್ಯಾದೇಶ ನೀಡುವ ಪೂರ್ವದಲ್ಲಿ letter of acceptance ನೀಡಿ, ನಿಗಧಿಪಡಿಸಲಾಗುವ security deposit ಪಾವತಿಸಿದ ನಂತರ ಕಾರ್ಯಾದೇಶ ನೀಡಲಾಗುವುದು. |
| ಇ) | ಈಗಾಗಲೇ ಹಲವಾರು ಕಾಮಗಾರಿಗಳಿಗೆ ಕರೆದಿರುವ ಟೆಂಡರ್ ಪ್ರಕ್ರಿಯೆಯಲ್ಲಿ ತಾಂತ್ರಿಕವಾಗಿ ಹಾಗೂ ಆರ್ಥಿಕವಾಗಿ ಅರ್ಹರಿದ್ದರೂ ಸಹ ಕಾಮಗಾರಿಯನ್ನು ಮಾಡಲು ಕಾರ್ಯಾದೇಶವನ್ನು ನೀಡದಿರುವ ಕಾಮಗಾರಿಗಳ ವಿವರಗಳನ್ನು ಒದಗಿಸುವುದು; ಕೋಲಾರ ಜಿಲ್ಲೆಯಲ್ಲಿ ಇಂತಹ ಎಷ್ಟು ಪ್ರಕರಣಗಳಿವೆ; | ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿ ಹಾಗೂ ಕೋಲಾರ ಜಿಲ್ಲೆಯಲ್ಲಿ ಕಾಮಗಾರಿಗಳ ಆರ್ಥಿಕ ಬಿಡ್ ಅನುಮೋದನೆಯಾದ ನಂತರ ಕಾರ್ಯಾದೇಶ ನೀಡದಿರುವ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಈ) | ಕಾರ್ಯಾದೇಶ ನೀಡುವ ಸಂಬಂಧವಾಗಿ ಲೋಕೋಪಯೋಗಿ ಇಲಾಖೆಗೆ ಕಳೆದ ಮೂರು ವರ್ಷದಿಂದ ಎಷ್ಟು ಪ್ರಸ್ತಾವನೆಗಳು ಬಂದಿದೆ; ಕಾಲಮಿತಿಯೊಳಗೆ ಅವುಗಳಿಗೆ ಅನುಮೋದನೆ ನೀಡಲಾಗಿದೆಯೇ; ಅಥವಾ ವಿಳಂಬವಾಗಿದ್ದಲ್ಲಿ ಕಾರಣಗಳೇನು: | ಕಳೆದ ಮೂರು ವರ್ಷದಿಂದ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯಾದೇಶ ನೀಡಲಾಗಿರುವ ವಲಯವಾರು ವಿವರಗಳು ಈ ಕೆಳಗಿನಂತಿದೆ: |

| ವಲಯ | ಕಾರ್ಯಾದೇಶ ನೀಡಿದ ಕಾಮಗಾರಿಗಳ ಸಂಖ್ಯೆ |
|---|---|
| ದಕ್ಷಿಣ | 16476 |
| ಉತ್ತರ | 17618 |
| ಈಶಾನ್ಯ | 17662 |

| | ಪ್ರಶ್ನೆಗಳು | ಉತ್ತರಗಳು |
|---|---|---|
| | | <table><tr><td>ಕೇಂದ್ರ</td><td>15249</td></tr><tr><td>SHDP</td><td>176 (ಪ್ಯಾಕೇಜ್‌ಗಳು)</td></tr><tr><td>PRAMC</td><td>447</td></tr><tr><td>KRDCL</td><td>40</td></tr></table><br>ಹೀಗೆ ಕಳೆದ ಮೂರು ವರ್ಷಗಳಿಂದ ಇಲಾಖೆಯಲ್ಲಿ ಒಟ್ಟು 67668 ಎಲ್ಲಾ ಕಾಮಗಾರಿಗಳಿಗೆ ಕಾಲಮಿತಿಯೊಳಗೆ ಕಾರ್ಯಾದೇಶ ನೀಡಲಾಗಿರುತ್ತದೆ. |
| ಉ) | ಟೆಂಡರ ಪ್ರಕ್ರಿಯೆಯಲ್ಲಿ ಭಾಗವಹಿಸಿ, ತಾಂತ್ರಿಕವಾಗಿ ಹಾಗೂ ಆರ್ಥಿಕವಾಗಿ ಸರಿ ಇದ್ದರೂ ಸಹ, ಇವರುಗಳನ್ನು ಬಿಟ್ಟು ಬೇರೆ ಗುತ್ತಿಗೆದಾರರನ್ನು ಆಯ್ಕೆ ಮಾಡಿಕೊಳ್ಳಲು ಸರ್ಕಾರದ ನಿಯಮದಲ್ಲಿ ಅವಕಾಶ ಇದೆಯೇ? | ಟೆಂಡರ ಪ್ರಕ್ರಿಯೆಯಲ್ಲಿ ಭಾಗವಹಿಸಿ ತಾಂತ್ರಿಕವಾಗಿ ಹಾಗೂ ಆರ್ಥಿಕವಾಗಿ ಅರ್ಹರಾಗುವ ಗುತ್ತಿಗೆದಾರರನ್ನು ಆಯ್ಕೆ ಮಾಡಲು ಅವಕಾಶವಿರುತ್ತದೆ. |

ಲೋಇ 8 ಸಿಕ್ಯೂಎನ್ 2023(ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು